All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

03.03.2025 19.35 P.M.

*****************

ಮುಖ್ಯಾಂಶಗಳು

- ಏಷ್ಯಾಟಿಕ್ ಸಿಂಹಗಳ ಆವಾಸ ಸ್ಥಾನ ಸಂರಕ್ಷಿಸುವಲ್ಲಿ ಬುಡಕಟ್ಟು ಸಮುದಾಯಗಳ ಪಾತ್ರ ಶ್ಲಾಘನೀಯ - ಪ್ರಧಾನಿ ನರೇಂದ್ರ ಮೋದಿ
- ಬೆಲ್ಜಿಯಂ ರಾಜಕುಮಾರಿ ಆಸ್ಟ್ರಿಡ್ ಅವರೊಂದಿಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ದ್ವಿಪಕ್ಷೀಯ ಮಾತುಕತೆ
- ಐಆರ್‌ಎಫ್‌ಸಿ, ಐಆರ್‌ಸಿಟಿಸಿ ನಿಗಮಗಳಿಗೆ ನವರತ್ನ ಸ್ಥಾನಮಾನ
- ಡಬ್ಲ್ಯೂಪಿಎಲ್ ಕ್ರಿಕೆಟ್; ಯುಪಿ ವಾರಿಯರ್ಸ್ - ಗುಜರಾತ್ ಜೈಂಟ್ಸ್ ಮುಖಾಮುಖಿ

*****************

ಏಷ್ಯಾಟಿಕ್ ಸಿಂಹಗಳ ಆವಾಸ ಸ್ಥಾನವನ್ನು ಸಂರಕ್ಷಿಸುವಲ್ಲಿ ಬುಡಕಟ್ಟು ಸಮುದಾಯಗಳು ಮತ್ತು ಮಹಿಳೆಯರ ಪಾತ್ರವನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದರು.

ಏಷ್ಯಾಟಿಕ್ ಸಿಂಹಗಳ ಸಂಖ್ಯೆಯಲ್ಲಿ ಸ್ಥಿರವಾದ ಏರಿಕೆಯನ್ನು ಖಚಿತಪಡಿಸುವ ನಿಟ್ಟಿನಲ್ಲಿ ಗಿರ್ ಕಾಡಿನಲ್ಲಿನ ಸಾಮೂಹಿಕ ಸಂರಕ್ಷಣಾ ಪ್ರಯತ್ನಗಳ ಕುರಿತು ಇದೇ ವೇಳೆ, ಪ್ರಧಾನಿ ಮೆಚ್ಚುಗೆ ವ್ಯಕ್ತಪಡಿಸಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ

ವಿಶ್ವ ವನ್ಯ ಜೀವಿ ಸಂರಕ್ಷಣಾ ದಿನದ ಸಂದರ್ಭದಲ್ಲಿ ಗುಜರಾತ್‌ನ ಜುನಾಗಢ ಜಿಲ್ಲೆಯ ಸಸಾನ್ ಗಿರ್‌ನಲ್ಲಿ ನಡೆದ ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಏಳನೇ ಸಭೆಯ ಅಧ್ಯಕ್ಷತೆಯನ್ನು ಪ್ರಧಾನಿ ವಹಿಸಿದ್ದರು. ಕೇಂದ್ರ ಪರಿಸರ ಸಚಿವ ಭೂಪೇಂದ್ರ ಯಾದವ್, ವಿವಿಧ ರಾಜ್ಯಗಳ ಸದಸ್ಯರು, ಈ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಎನ್‌ಜಿಒಗಳ ಪ್ರತಿನಿಧಿಗಳು, ಮುಖ್ಯ ವನ್ಯಜೀವಿ ವಾರ್ಡನ್‌ಗಳು ಮತ್ತು ವಿವಿಧ ರಾಜ್ಯಗಳ ಕಾರ್ಯದರ್ಶಿಗಳು ಭಾಗವಹಿಸಿದ್ದರು.

ವನ್ಯಜೀವಿ ಸಂರಕ್ಷಣೆ ಮತ್ತು ನಿರ್ವಹಣೆ ಕುರಿತ ವಿವಿಧ ವಿಷಯಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು. ಇದೇ ವೇಳೆ, ಜುನಾಗಢ ರಾಷ್ಟ್ರೀಯ ವನ್ಯಜೀವಿಗಳ ಕೇಂದ್ರಕ್ಕೆ ವರ್ಚುಯಲ್ ಮೂಲಕ ಶಂಕುಸ್ಥಾಪನೆ ನೆರವೇರಿಸಿದರು.

೧೬ನೇ ಏಷ್ಯಾಟಿಕ್ ಸಿಂಹಗಳ ಜನಸಂಖ್ಯಾ ಸಮೀಕ್ಷೆ-೨೦೨೫ ಮತ್ತು ಕೊಯಮತ್ತೂರಿನಲ್ಲಿ ಮಾನವ ವನ್ಯಜೀವಿ ಸಂಘರ್ಷ ನಿರ್ವಹಣೆಯ ಸೆಕಾನ್ ವರದಿಯನ್ನು ಅನಾವರಣಗೊಳಿಸಿದರು.

ದೇಶದಲ್ಲಿ ನಡೆಸಲಾದ ಮೊದಲ ಡಾಲ್ಫಿಂಗ್ ಸಮೀಕ್ಷಾ ವರದಿಯನ್ನು ಪ್ರಧಾನಿ ನರೇಂದ್ರ ಮೋದಿ ಬಿಡುಗಡೆಗೊಳಿಸಿದರು. ಸಮೀಕ್ಷೆ ಪ್ರಕಾರ, ದೇಶದಲ್ಲಿ ಒಟ್ಟು ೬ ಸಾವಿರದ ೩೨೭ ಡಾಲ್ಫಿನ್‌ಗಳಿವೆ. ಉತ್ತರ ಪ್ರದೇಶದಲ್ಲಿ ಅತಿ ಹೆಚ್ಚು ಡಾಲ್ಫಿನ್‌ಗಳಿದ್ದು, ನಂತರದ ಸ್ಥಾನಗಳಲ್ಲಿ ಕ್ರಮವಾಗಿ ಬಿಹಾರ, ಪಶ್ಚಿಮ ಬಂಗಾಲ ಮತ್ತು ಅಸ್ಸಾಂ ಇವೆ.

ಸಭೆಗೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು, ಗಿರ್ ರಾಷ್ಟ್ರೀಯ ಉದ್ಯಾನದಲ್ಲಿ ಅರಣ್ಯ ಸಫಾರಿ ಕೈಗೊಂಡರು. ಇದೇ ವೇಳೆ ಅವರು, ವನ್ಯಜೀವಿಗಳ ರಕ್ಷಣೆ ಮತ್ತು ನಿರ್ವಹಣೆಗೆ ಗಸ್ತು ತಿರುಗುವ ದ್ವಿಚಕ್ರ ವಾಹನಗಳಿಗೆ ಹಸಿರು ನಿಶಾನೆ ತೋರಿದರು ಹಾಗೂ ಅಲ್ಲಿನ ಸಿಬ್ಬಂದಿಯೊಂದಿಗೆ ಸಂವಾದ ನಡೆಸಿದರು.

******************

ನವದೆಹಲಿಯ ರಾಷ್ಟ್ರಪತಿ ಭವನದಲ್ಲಿಂದು ೮ನೇ ಸಂದರ್ಶಕ ಪ್ರಶಸ್ತಿಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶದ ಅನೇಕ ಶಿಕ್ಷಣ ಸಂಸ್ಥೆಗಳು ಜಾಗತಿಕ ಬ್ರ್ಯಾಂಡ್ ಮೌಲ್ಯವನ್ನು ಸಾಧಿಸುವ ಸಾಮರ್ಥ್ಯ ಹೊಂದಿವೆ. ದೇಶದಲ್ಲಿ ಸಂಶೋಧನೆಗೆ ಮತ್ತಷ್ಟು ಉತ್ತೇಜನ ನೀಡುವ ಅಗತ್ಯವಿದೆ ಎಂದು ಹೇಳಿದರು.

ಕೃತಕಬುದ್ಧಿಮತ್ತೆ-ಎಐ ಕ್ಷೇತ್ರದಲ್ಲಿ ನೂತನ ಕ್ರಮಗಳನ್ನು ಕೈಗೊಳ್ಳುವಂತೆ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಸಲಹೆ ನೀಡಿದರು.

ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು

******************

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನವದೆಹಲಿಯಲ್ಲಿ ಇಂದು ಬೆಲ್ಜಿಯಂ ರಾಜಕುಮಾರಿ ಆಸ್ಟ್ರಿಡ್ ಮತ್ತು ರಕ್ಷಣಾ ಸಚಿವೆ ಥಿಯೊ ಫ್ರಾಂಕೆನ್ ಅವರೊಂದಿಗೆ ಸಭೆ ನಡೆಸಿದರು.

ಸಭೆಯಲ್ಲಿ ಭಾರತ ಮತ್ತು ಬೆಲ್ಜಿಯಂ ನಡುವೆ ಇಂಡೋಫೆಸಿಫಿಕ್ ಪ್ರದೇಶದಲ್ಲಿ, ವಿಶೇಷವಾಗಿ ಕಡಲ ಕ್ಷೇತ್ರದಲ್ಲಿ ರಕ್ಷಣಾ ಒಪ್ಪಂದಗಳ ಸಾಧ್ಯತೆಗಳ ಬಗ್ಗೆ ಚರ್ಚಿಸಲಾಯಿತು. ಇದೇ ವೇಳೆ, ಎರಡೂ ದೇಶಗಳ ನಡುವೆ ರಕ್ಷಣಾ ಕೈಗಾರಿಕಾ ಸಹಕಾರವನ್ನು ಹೆಚ್ಚಿಸುವ ಮಾರ್ಗಗಳು ಮತ್ತು ವಿಧಾನಗಳನ್ನು ಚರ್ಚಿಸಲಾಯಿತು.

ಭಾರತದ ರಕ್ಷಣಾ ಕ್ಷೇತ್ರದಲ್ಲಿ ಬೆಲ್ಜಿಯಂ ಹೂಡಿಕೆಗಳನ್ನು ರಾಜನಾಥ್ ಸಿಂಗ್ ಸ್ವಾಗತಿಸಿದರು.

ಭಾರತದಲ್ಲಿ ತಮ್ಮ ವ್ಯಾಪಾರವನ್ನು ವಿಸ್ತರಿಸುವ ಮೂಲಕ ಮತ್ತು ಭಾರತೀಯ ಮಾರಾಟಗಾರರನ್ನು ತಮ್ಮ ಪೂರೈಕೆ ಸರಪಣಿಯಲ್ಲಿ ಸಂಯೋಜಿಸುವ ಮೂಲಕ ಬೆಲ್ಜಿಯಂ ಕಂಪನಿಗಳು ಪ್ರಮುಖ ಪಾತ್ರವಹಿಸಬಹುದು ಎಂದು ಸಚಿವ ರಾಜನಾಥ್ ಸಿಂಗ್ ಸಲಹೆ ನೀಡಿದರು.

ಇದೇ ವೇಳೆ, ಸಾಂಸ್ಥಿಕ ರಕ್ಷಣಾ ಸಹಕಾರ ಕಾರ್ಯವಿಧಾನವನ್ನು ಅನ್ವೇಷಿಸಲು ಉಭಯ ದೇಶಗಳು ಪರಸ್ಪರ ಒಪ್ಪಿಕೊಂಡವು.

******************

ನವದೆಹಲಿಯಲ್ಲಿಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ಬೆಲ್ಜಿಯಂ ಉಪಪ್ರಧಾನಿ ಹಾಗೂ ವಿದೇಶಾಂಗ ಸಚಿವ ಮ್ಯಾಗ್ನಿಮ್ ಪ್ರವಟ್ ಅವರೊಂದಿಗೆ ಸಭೆ ನಡೆಸಿದರು.

ಈ ವೇಳೆ ಮಾತನಾಡಿದ ಅವರು, ಭಾರತ ಹಾಗೂ ಬೆಲ್ಜಿಯಂ ಐತಿಹಾಸಿಕ ಸಂಬಂಧಗಳನ್ನು ಹೊಂದಿದೆ. ವ್ಯಾಪಾರ, ಕೈಗಾರಿಕೆ, ಶಿಕ್ಷಣ, ನಾವಿನ್ಯತೆ, ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಉಭಯ ರಾಷ್ಟ್ರಗಳು ಉತ್ತಮ ಹಾಗೂ ಸ್ಥಿರ ಸಂಬಂಧಗಳನ್ನು ಸ್ಥಾಪಿಸಿವೆ.

ಇನ್ನು, ಸೆಮಿಕಂಡೆಕ್ಟರ್, ಕೃತಕಬುದ್ಧಿಮತ್ತೆ ಹಾಗೂ ಶುದ್ಧ ಇಂಧನ ಕ್ಷೇತ್ರಗಳಲ್ಲಿ ಸಹಕಾರ ದೊರೆತಂತೆ ಮಾತುಕತೆ ನಡೆಯುತ್ತಿದೆ ಎಂದು ಮಾಹಿತಿ ನೀಡಿದರು.

ಆಸ್ಟ್ರಿಡ್ ಅವರು, ನಾಳೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಲಿದ್ದಾರೆ.

*****************

ಕೇಂದ್ರ ಸರ್ಕಾರವು ಭಾರತೀಯ ರೈಲ್ವೆ ಹಣಕಾಸು ನಿಗಮ-ಐಆರ್‌ಎಫ್‌ಸಿ ಮತ್ತು ಭಾರತೀಯ ರೈಲ್ವೆ ಕ್ಯಾಟರಿಂಗ್ ಮತ್ತು ಪ್ರವಾಸೋದ್ಯಮ ನಿಗಮ -ಐಆರ್‌ಸಿಟಿಸಿಗೆ ನವರತ್ನ ಸ್ಥಾನಮಾನವನ್ನು ನೀಡಿದೆ.

ಐಆರ್‌ಎಫ್‌ಸಿ ರೈಲ್ವೆ ಸಚಿವಾಲಯದ ಕೇಂದ್ರ ಸಾರ್ವಜನಿಕ ವಲಯ ಉದ್ಯಮವಾಗಿದ್ದು, ವಾರ್ಷಿಕ ೨೬ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ವಹಿವಾಟು ಹೊಂದಿದೆ. ಐಆರ್‌ಸಿಟಿಸಿ ಸಹ ರೈಲ್ವೆ ಸಚಿವಾಲಯದ ಕೇಂದ್ರ ಸಾರ್ವಜನಿಕ ವಲಯದ ಉದ್ಯಮವಾಗಿದ್ದು, ವಾರ್ಷಿಕ ೪ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ವಹಿವಾಟು ಹೊಂದಿದೆ. ನವರತ್ನ ಸ್ಥಾನಮಾನಕ್ಕೆ ಮೇಲ್ದರ್ಜೆಗೇರಿಸಿದ್ದಕ್ಕಾಗಿ ರೈಲ್ವೆ ಸಚಿವೆ ಅಶ್ವಿನಿ ವೈಷ್ಣವ್, ಐಆರ್‌ಸಿಟಿಸಿ ಮತ್ತು ಐಆರ್‌ಎಫ್‌ಸಿ ಗಳನ್ನು ಅಭಿನಂದಿಸಿದ್ದಾರೆ.

*****************

ರಾಜಸ್ಥಾನದ ಜೈಪುರದ ರಾಜಸ್ಥಾನ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಮೂರು ದಿನಗಳ ಏಷ್ಯಾ ಮತ್ತು ಪೆಸಿಫಿಕ್‌ನಲ್ಲಿ ೧೨ ನೇ ಪ್ರಾದೇಶಿಕ ೩ಆರ್ ಮತ್ತು ಸಮರ್ಗ ಆರ್ಥಿಕ ಕಾರ್ಯಕ್ರಮ ಚಾಲನೆ ನೀಡಲಾಯಿತು.

ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಕಾರ್ಯಕ್ರಮ ಉದ್ಘಾಟಿಸಿದರು.

"ಏಷ್ಯಾ-ಪೆಸಿಫಿಕ್ ಪ್ರದೇಶದಲ್ಲಿ ಇಂಗಾಲ ಹೊರಸೂಸುವಿಕೆ ಪ್ರಮಾಣವನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ ಸಮಾಜಗಳನ್ನು ಜಾಗೃತಗೊಳಿಸುವುದು" ಎಂಬ ವಿಷಯ ಕುರಿತು, ಕಾರ್ಯಕ್ರಮದಲ್ಲಿ ಚರ್ಚೆಗಳು ನಡೆಯಲಿವೆ.

ಕಾರ್ಯಕ್ರಮದಲ್ಲಿ ಭಾಗವಹಿಸುವ ದೇಶಗಳಿಗೆ, ೩ಆರ್ ಮತ್ತು ಆರ್ಥಿಕ ನೀತಿಗಳನ್ನು ಅಭಿವೃದ್ಧಿಪಡಿಸುವ ಗುರಿ ಸಾಧನೆಗೆ ಉತ್ತೇಜನ ನೀಡುವ ಉದ್ದೇಶ ಹೊಂದಿದೆ. ಸಮಗ್ರ ತ್ಯಾಜ್ಯ ನಿರ್ವಹಣಾ ಯೋಜನೆಗಳನ್ನು ಒಳಗೊಂಡಿರುವ ಒಪ್ಪಂದಗಳಿಗೆ ಇದೇ ಸಂದರ್ಭದಲ್ಲಿ ಸಹಿ ಹಾಕಲಾಗುವುದು.

ರಾಜಸ್ಥಾನದ ಮುಖ್ಯಮಂತ್ರಿ ಭಜನ್‌ಲಾಲ್ ಶರ್ಮಾ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

*****************

ಮುಂದಿನ ಎರಡು ವರ್ಷಗಳಲ್ಲಿ ಭಾರತ ವಿಶ್ವದ ಮೂರನೇ ಅತಿ ದೊಡ್ಡ ಆರ್ಥಿಕತೆಯಾಗುವ ಹಾದಿಯಲ್ಲಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪುನರುಚ್ಚರಿಸಿದ್ದಾರೆ.

ನವದೆಹಲಿಯಲ್ಲಿಂದು ನಡೆದ ಸಶಸ್ತ್ರ ಪಡೆಗಳ ದಿನದ ಸಿಎಸ್‌ಆರ್ ಸಮಾವೇಶ ಉದ್ದೇಶಿಸಿ ಮಾತನಾಡಿದ ಅವರು, ಪ್ರಸ್ತುತ ಭಾರತ ವಿಶ್ವದ ಐದನೇ ಅತಿ ದೊಡ್ಡ ಆರ್ಥಿಕತೆಯಾಗಿದೆ ಎಂದರು.

ದೇಶದ ಆರ್ಥಿಕ ಅಭಿವೃದ್ಧಿಯಲ್ಲಿ ಸಾರ್ವಜನಿಕ ಮತ್ತು ಖಾಸಗಿ ವಲಯಗಳು ನಿರ್ಣಾಯಕ ಪಾತ್ರ ವಹಿಸುತ್ತವೆ. ಆರ್ಥಿಕ ಸ್ವಾತಂತ್ರ್ಯದತ್ತ ಭಾರತದ ಪ್ರಗತಿಯು ಎರಡು ವಲಯಗಳ ಭಾಗವಹಿಸುವಿಕೆಯಿಂದ ಸಾಧ್ಯವಾಗಿದೆ. ರಾಷ್ಟ್ರೀಯ ಭದ್ರತೆಯಲ್ಲಿ ಸ್ವಾವಲಂಬನೆಯನ್ನು ಸಾಧಿಸಲು ಖಾಸಗಿ ವಲಯದ ಒಳಗೊಳ್ಳುವಿಕೆ ಅಗತ್ಯ ಎಂದು ಅವರು ಪ್ರತಿಪಾದಿಸಿದರು.

ಭಾರತದ ತಲಾ ಆದಾಯವು ನಿರಂತರವಾಗಿ ಏರಿಕೆಯಾಗುತ್ತಿದೆ. ಇದು ದೇಶದ ಆರ್ಥಿಕ ಬೆಳವಣಿಗೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ ಸಚಿವ ರಾಜನಾಥ್ ಸಿಂಗ್, ದೇಶದ ಗಡಿಗಳ ರಕ್ಷಣೆಯಲ್ಲಿ ಭಾರತೀಯ ಸೈನಿಕರ ಅಚಲ ಸಮರ್ಪಣೆಯನ್ನು ಶ್ಲಾಘಿಸಿದರು.

*****************

ದೇಶದಲ್ಲಿ ಮಹಿಳೆಯರ ಘನತೆ ಮತ್ತು ಸುರಕ್ಷತೆಯನ್ನು ಕಾಪಾಡಲು ಸರ್ಕಾರ ಭಾರತೀಯ ಕಾನೂನುಗಳನ್ನು ತಿದ್ದುಪಡಿ ಮಾಡಿದೆ ಎಂದು ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಹೇಳಿದ್ದಾರೆ.

ನವದೆಹಲಿಯ ವಿಜ್ಞಾನಭವನದಲ್ಲಿಂದು ಮಹಿಳೆಯರಿಗೆ ಸಂಬಂಧಿಸಿದ ಸೈಬರ್ ಕಾನೂನುಗಳು ಮತ್ತು ಸೈಬರ್ ಜಾಗೃತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಕೃತಕ ಬುದ್ಧಿಮತ್ತೆ-ಎಐ ವೈಶಿಷ್ಟ್ಯಗಳ ಕಾರಣ ಮಹಿಳೆಯರ ವಿರುದ್ಧದ ಅಪರಾಧಗಳು ಹೆಚ್ಚಿವೆ. ಆದರೆ, ಅದನ್ನು ಹತ್ತಿಕ್ಕಲು ಕೇಂದ್ರ ಸರ್ಕಾರ ಹಲವಾರು ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದರು.

ಸೈಬರ್ ಚಟುವಟಿಕೆಗಳ ಸಮಯದಲ್ಲಿ ಮಹಿಳೆಯರು ಜಾಗರೂಕರಾಗಿರಬೇಕು. ಯಾವುದೇ ಘಟನೆ ಸಂಭವಿಸಿದ್ದಲ್ಲಿ, ಕೂಡಲೇ ದೂರನ್ನು ನೀಡಬೇಕು ಎಂದು ಸಚಿವ ಅರ್ಜುನ್ ರಾಮ್ ಮೇಘವಾಲ್ ಸಲಹೆ ನೀಡಿದರು.

ರಾಷ್ಟ್ರೀಯ ಮಹಿಳಾ ಆಯೋಗ ಆಯೋಜಿಸಿರುವ ಈ ಕಾರ್ಯಾಗಾರವು ಮಹಿಳೆಯರಿಗಾಗಿ ಸೈಬರ್ ಕಾನೂನುಗಳನ್ನು ಬಲಪಡಿಸಲು ೨೦೦ಕ್ಕೂ ಹೆಚ್ಚು ಪ್ರಮುಖ ಸುಧಾರಣೆಗಳನ್ನು ಚರ್ಚಿಸುವ ಗುರಿಯನ್ನು ಹೊಂದಿದೆ.

*****************

ಉತ್ತರ ಪ್ರದೇಶದ ಲಖನೌದ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಏಕನ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಮಹಿಳೆಯರ ಪ್ರೀಮಿಯರ್ ಲೀಗ್-ಡಬ್ಲ್ಯೂಪಿಎಲ್ ಕ್ರಿಕೆಟ್ ಪಂದ್ಯದಲ್ಲಿಂದು ಯುಪಿ ವಾರಿಯರ್ಸ್ ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಯುಪಿ ವಾರಿಯರ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

*****************

ಭಾರತದ ಕೃಷ್ಣ ಜಯಶಂಕರ್, ೨೦೨೫ರ ಮೌಂಟೇನ್ ವೆಸ್ಟ್ ಇಂಡೋರ್ ಟ್ರ್ಯಾಕ್ ಮತ್ತು ಫೀಲ್ಡ್ ಚಾಂಪಿಯನ್‌ಶಿಪ್‌ನ ಒಳಾಂಗಣ ಶಾಟ್‌ಪುಟ್ ಸ್ಪರ್ಧೆಯಲ್ಲಿ ೧೬.೦೩ ಮೀಟರ್ ದೂರ ಎಸೆಯುವ ಮೂಲಕ ಈ ಸಾಧನೆ ಮಾಡಿದ ಮೊದಲ ಭಾರತೀಯ ಮಹಿಳೆ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಈ ಮೂಲಕ ಈ ಹಿಂದಿನ ೧೫.೫೪ ಮೀಟರ್ ಶಾಟ್‌ಪುಟ್ ದಾಖಲೆಯನ್ನು ೨೨ ವರ್ಷದ ಕೃಷ್ಣ ಜಯಶಂಕರ್ ಮುರಿದಿದ್ದಾರೆ.

ಅಂತಿಮ ಸುತ್ತಿನವರೆಗೂ ಕೃಷ್ಣ ಜಯಶಂಕರ್ ನಾಲ್ಕನೇ ಸ್ಥಾನದಲ್ಲಿದ್ದರು. ಆದಾಗ್ಯೂ, ಅವರು ತಮ್ಮ ಅಂತಿಮ ಎಸೆತದೊಂದಿಗೆ ಕಂಚಿನ ಪದಕವನ್ನು ಗೆದ್ದರು. ಅಮೆರಿಕದ ಮಾಯಾ ಲೆಸ್ನರ್ ಚಿನ್ನ ಗೆದ್ದರೆ, ಗ್ಯಾಬಿ ಮಾರ್ನ್ಸ್ ಬೆಳ್ಳಿ ಪದಕ ಪಡೆದರು.

******************

ಐಸಿಸಿ ಚಾಂಪಿಯನ್ಸ್ ಕ್ರಿಕೆಟ್ ಟ್ರೋಫಿಯ ಮೊದಲ ಸೆಮಿ ಫೈನಲ್ ಪಂದ್ಯ ನಾಳೆ ದುಬೈನಲ್ಲಿ ನಡೆಯಲಿದ್ದು, ಭಾರತ-ಆಸ್ಟ್ರೇಲಿಯಾ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ನಾಳೆ ಮಧ್ಯಾಹ್ನ ೨.೩೦ಕ್ಕೆ ಆರಂಭವಾಗಲಿದೆ.

ನಾಡಿದ್ದು, ೫ರಂದು ಲಾಹೋರ್‌ನಲ್ಲಿ ನ್ಯೂಜಿಲೆಂಡ್ ತಂಡ, ದಕ್ಷಿಣ ಆಫ್ರಿಕಾ ವಿರುದ್ಧ ಸೆಣಸಲಿದೆ. ಫೈನಲ್ ಪಂದ್ಯ ಇದೇ ೯ ರಂದು ಜರುಗಲಿದೆ.

******** ಮುಕ್ತಾಯ *******